## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಚಂದ್ರಶೇಖರ ಹೆಚ್.ಎಸ್. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆಲೂರು ತಾಲ್ಲೂಕು, ಹಾಸನ ಇವರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ ರವರಿಗೆ ವಹಿಸುವ ಬಗ್ಗೆ ಆದೇಶ

ಓದಲಾಗಿದೆ:- 1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಕಂಪ್ಲೆಂಟ್/ಉಪಲೋಕ್/ಎಂವೈಎಸ್-7091/2014/ಡಿಆರ್‌ಇ-5, ದಿನಾಂಕ:06-03-2017

2) ಮಾನ್ಯ ಉಪ ಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ 1984ರ ಕಲಂ.12(3) ರಡಿ ಸಲ್ಲಿಸಿರುವ ವರದಿ ಸಂಖ್ಯೆ: ಕಂಪ್ಲೆಂಟ್/ ಉಪಲೋಕ್/ ಎಂವೈಎಸ್-7301/2014/ಡಿಆರ್‌ಇ-1, ದಿ:27-02-2017.

-000-

<u>ಪ್ರಸ್ತಾವನೆ:</u>

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:25-03-2017 ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-2 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ ಮಾನ್ಯ ಉಪಲೋಕಾಯುಕ್ತ-2 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-2 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿ, ಶ್ರೀ ಬಿ.ಎಸ್.ಶೇಖರ್, ಬಿನ್ ಸಿದ್ಧಪ್ಪಗೌಡ ಜೆ.ಬೇಲೂರು, ಪಾಳ್ಯ ಅಂಚೆ, ಆಲೂರು ತಾಲ್ಲೂಕು ಹಾಸನ ಜಿಲ್ಲೆ ಇವರು (1) ಶ್ರೀಮತಿ ಲಕ್ಷ್ಮೀ, ಬಿಲ್ ಕಲೆಕ್ಟರ್, ಮಡಬಲು ಗ್ರಾಮ ಪಂಚಾಯತಿ, ಆಲೂರು ತಾಲ್ಲೂಕು, ಹಾಸನ ಜಿಲ್ಲೆ ಮತ್ತು (2) ಶ್ರೀ ಚಂದ್ರಶೇಖರ್, ಹೆಚ್.ಎಸ್. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಆಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರುಗಳ ವಿರುದ್ಧ ಮಡಬಲು ಗ್ರಾಮಸ್ಥರಿಂದ ಮನೆಯ ಕಂದಾಯ ನೀರಿನ ಕಂದಾಯವನ್ನು ವಸೂಲಿ ಮಾಡುವಾಗ ಸುಳ್ಳು ರಸೀದಿಗಳನ್ನು ಕೊಟ್ಟು ಪಂಚಾಯ್ತಿಗೆ ಆರ್ಥಿಕ ನಷ್ಟ ಉಂಟು ಮಾಡಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಕಛೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

| ಎದುರುದಾರರ ಹೆಸರು ಮತ್ತು ವಿವರ | ಎದುರುದಾರರ ಸಂಖ್ಯೆ |
|---|---|
| 1) ಶ್ರೀಮತಿ ಲಕ್ಷ್ಮೀ, ಬಿಲ್ ಕಲೆಕ್ಟರ್, ಮಡಬಲು ಗ್ರಾಮ ಪಂಚಾಯತಿ, ಆಲೂರು ತಾಲ್ಲೂಕು, ಹಾಸನ ಜಿಲ್ಲೆ | 1 |
| 2) ಶ್ರೀ ಚಂದ್ರಶೇಖರ ಹೆಚ್.ಎಸ್. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆಲೂರು ತಾಲ್ಲೂಕು, ಹಾಸನ ಜಿಲ್ಲೆ | 2 |

ಸದರಿ ದೂರಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಕಛೇರಿಯು ತನಿಖೆ ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಈ ಕೆಳಕಂಡ ಅಂಶಗಳು ವ್ಯಕ್ತವಾಗುತ್ತವೆ:-

(ಅ) ದೂರುದಾರರು ತಮ್ಮ ದೂರಿನಲ್ಲಿ 1ನೇ ಎದುರುದಾರರಾದ ಶ್ರೀಮತಿ ಲಕ್ಷ್ಮೀ ಇವರು ಮಡಬಲು ಗ್ರಾಮದ ಗ್ರಾಮಸ್ಥರಿಂದ ಮನೆಯ ನೀರಿನ ಕಂದಾಯಕ್ಕೆ ಸುಳ್ಳು ರಸೀದಿಗಳನ್ನು ಕೊಟ್ಟು, ಪಂಚಾಯ್ತಿಗೆ ನಷ್ಟ ಉಂಟು ಮಾಡಿರುತ್ತಾರೆಂದು ತಿಳಿಸುತ್ತಾ, ಸಂಬಂಧಪಟ್ಟ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಯವರಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದ್ದು, ಸದರಿಯವರು ಗ್ರಾಮ ಪಂಚಾಯತಿಯಲ್ಲಿ ದಿನಾಂಕ:3-09-2012 ರಂದು ಸಾಮಾನ್ಯ ಸಭೆ ಕರೆದು ಶ್ರೀಮತಿ ಲಕ್ಷ್ಮೀ ಇವರನ್ನು ಕೆಲಸದಿಂದ ವಜಾ ಮಾಡಿದ್ದು ಅವರಿಂದ ರೂ.4,300/- ಗಳನ್ನು ಪಂಚಾಯ್ತಿ ಖಾತೆಗೆ ಜಮಾ ಮಾಡಿಸಿರುತ್ತಾರೆ ಎಂದು ವರದಿಸಿರುತ್ತಾರೆ.

(ಆ) ಆದರೆ, 2ನೇ ಎದುರುದಾರರಾದ ಶ್ರೀ ಚಂದ್ರಶೇಖರ್ ಹೆಚ್.ಎಸ್. ಕಾರ್ಯನಿರ್ವಾಹಕ ಅಧಿಕಾರಿಗಳು ಇವರು ಶ್ರೀಮತಿ ಲಕ್ಷ್ಮೀ ಬಿಲ್ ಕಲೆಕ್ಟರ್ (ಗೌರವ ಧನ) ಇವರನ್ನು ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು ವಜಾ ಮಾಡಿದ್ದಾಗ್ಯೂ ಸಹ ಅವರ ಪೂರ್ವಾನುಮತಿ ಪಡೆಯದೇ ಹಾಗೂ ಇವರ ವಿರುದ್ಧ ಮಾಡಿರುವ ಪಂಚಾಯತಿಯ ಠರಾವನ್ನು ಅಮಾನ್ಯಗೊಳಿಸಿ ಶ್ರೀಮತಿ ಲಕ್ಷ್ಮೀ, ಬಿಲ್ ಕಲೆಕ್ಟರ್ ಇವರನ್ನು ಪುನ: ಕೆಲಸಕ್ಕೆ ತೆಗೆದುಕೊಂಡು ಕರ್ತವ್ಯಲೋಪವೆಸಗಿರುತ್ತಾರೆಂದು ವರದಿಸಿರುತ್ತಾರೆ.

ಆದರೆ, 2ನೇ ಎದುರುದಾರರಾದ ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಯಾದ ಶ್ರೀ ಹೆಚ್.ಎಸ್.ಚಂದ್ರಶೇಖರ್ ರವರು ತಮ್ಮ ಆಕ್ಷೇಪಣೆಯಲ್ಲಿ ಮುಖ್ಯ ಕಾಯನಿರ್ವಹಣಾ ಅಧಿಕಾರಿರವರು ತಮ್ಮ ವರದಿ ಕೇಳಿದಾಗ ಬಿಲ್ ಕಲೆಕ್ಟರ್ ಶ್ರೀಮತಿ ಲಕ್ಷ್ಮಿ ಇವರು ಕರ್ತವ್ಯಲೋಪ ಹಣ ದುರುಪಯೋಗ ಮಾಡಿಕೊಂಡಿದ್ದಾರೆಂದು ವರದಿ ಮಾಡಿದ್ದು, ದಿನಾಂಕ: 26-08-2014 ರಲ್ಲಿ ಪಂಚಾಯತಿಯವರು ನ್ಯಾಯಯುತವಾದ ಅವಕಾಶ ನೀಡದೆ ಆದೇಶ ಮಾಡಿರುವುದರಿಂದ, ಸದರಿ ಲಕ್ಷ್ಮೀ ಇವರು ಮಾಡಿದ್ದ ಅಪೀಲಿನಲ್ಲಿ ಆದೇಶ ಮಾಡಲಾಗಿದ್ದು 2 ವ್ಯತಿರಿಕ್ತ ಆದೇಶಗಳನ್ನು ಮಾಡಿಲ್ಲ ಪಂಚಾಯತಿ ರಾಜ್ ಅಧಿನಿಯಮ ನಿಯಮ 113 ರಡಿಯಲ್ಲಿ ಇರುವ ಅಧಿಕಾರವನ್ನು ಚಲಾಯಿಸಿ ಆದೇಶ ಮಾಡಿರುವುದಾಗಿ ವರದಿಸಿರುತ್ತಾರೆ.

<u>ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರಡಿಯಲ್ಲಿ ಮಾಡಿರುವ ಶಿಫಾರಸ್ಸಿನ ವಿವರ ಈ ಕೆಳಕಂಡಂತಿದೆ:-</u>

1ನೇ ಎದುರುದಾರರಾದ ಶ್ರೀಮತಿ ಲಕ್ಷ್ಮಿ ಬಿಲ್ ಕಲೆಕ್ಟರ್ ಇವರು ಮನೆಯ ಕಂದಾಯ ನೀರಿನ ಕಂದಾಯವನ್ನು ಮಡಬಲು ಗ್ರಾಮಸ್ಥರಿಂದ ವಸೂಲಿ ಮಾಡುವಾಗ ಸುಳ್ಳು ರಸೀದಿ ಕೊಡುತ್ತಿದ್ದು, ರಸೀದಿಯ ಕಾಪಿಯಲ್ಲಿ ತೋರಿಸಿರುವ ಹಣವೇ ಬೇರೆಯಾಗಿದ್ದು, ಅಸಲ ರಸೀದಿಯಲ್ಲಿ ಬೇರೆ ಹಣ ತೋರಿಸಿ ಪಂಚಾಯತಿಗೆ ನಷ್ಟವನ್ನು ಉಂಟು ಮಾಡಿದ್ದು, ಸದರಿ ನೌಕರರು ಗೌರವ ಧನದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು, ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಯವರು ಗ್ರಾಮ ಪಂಚಾಯತಿಯಲ್ಲಿ ಸಾಮಾನ್ಯ ಸಭೆ ಕರೆದು ಕೆಲಸದಿಂದ ವಜಾ ಮಾಡಿರುವುದರಿಂದ, ಅವರ ವಿರುದ್ಧ ತಾತ್ಕಾಲಿಕ ಹಣ ದುರುಪಯೋಗಕ್ಕಾಗಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಹಾಗೂ ಈ ಬಗ್ಗೆ ಲೋಕಾಯುಕ್ತರವರಿಗೆ ವರದಿ ಸಲ್ಲಿಸುವಂತೆ ತಿಳಿಸಿದ್ದು, ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ 1993 ರನ್ವಯ ಬಿಲ್ ಕಲೆಕ್ಟರ್ ರವರ ವಿರುದ್ಧ ಕ್ರಮವಹಿಸಬೇಕಾಗಿರುತ್ತದೆ ಎಂದು ವರದಿಸಿರುತ್ತಾರೆ.

ಸದರಿ ಪ್ರಕರಣದಲ್ಲಿ ಭಾಗಿಯಾದ ಆಪಾದಿತ ಅಧಿಕಾರಿಯಾದ ಶ್ರೀ ಚಂದ್ರಶೇಖರ ಹೆಚ್.ಎಸ್. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆಲೂರು ತಾಲ್ಲೂಕು, ಹಾಸನ ಜಿಲ್ಲೆ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ 11 ರ ಇದೇ ನಿಯಮ 14(ಎ) ರನ್ವಯ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸುವಂತೆ ವರದಿಸಿರುತ್ತಾರೆ.

ಸದರಿ ಪ್ರಕರಣವನ್ನು ಪರಿಶೀಲಿಸಲಾಗಿ, ಈ ಕೆಳಕಂಡ ಅಧಿಕಾರಿ ಸಾರ್ವಜನಿಕ / ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷತೆ ವಹಿಸಿ ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯಲೋಪವೆಸಗಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1)(i),(ii) ಮತ್ತು (iii) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾದ್ಯರಾಗಿದ್ದು, ಈ ಕೆಳಕಂಡಂತೆ ಕ್ರಮವಹಿಸಿದೆ.

(ಎ) 1ನೇ ಎದುರುದಾರರಾದ ಶ್ರೀಮತಿ ಲಕ್ಷ್ಮೀ ಬಿಲ್ ಕಲೆಕ್ಟರ್ (ಗೌರವ ಧನದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರು) ಇವರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ 1984 ರ 12(3) ಹಾಗೂ 12(1) ರ ಶಿಫಾರಸ್ಸಿನಂತೆ, ಕರ್ನಾಟಕ ಪಂಚಾಯತ್ ರಾಜ್

ಅಧಿನಿಯಮ ಕಾಯ್ದೆ 1993 ರನ್ವಯ ಶಿಸ್ತು ಕ್ರಮ ಕೈಗೊಳ್ಳಲು ಕ್ರಮವಹಿಸಲು ಗ್ರಾಮ ಪಂಚಾಯತಿ ಶಾಖೆಗೆ ವರ್ಗಾಯಿಸಲಾಗಿದೆ.

(ಬಿ) 2ನೇ ಎದುರುದಾರರಾದ ಶ್ರೀ ಚಂದ್ರಶೇಖರ ಹೆಚ್.ಎಸ್. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ 11 ರ ನಿಯಮ 14(ಎ) ರನ್ವಯ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸಲು ಕೋರಿರುತ್ತಾರೆ.

ಸದರಿ ಪ್ರಕರಣವನ್ನು ಪರಿಶೀಲಿಸಲಾಗಿ 1ನೇ ಎದುರುದಾರರಾದ ಶ್ರೀ ಚಂದ್ರಶೇಖರ ಹೆಚ್.ಎಸ್. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಇದೇ ನಿಯಮಾವಳಿ ನಿಯಮ 14(ಎ)ರನ್ವಯ ಇಲಾಖಾ ವಿಚಾರಣೆಯನ್ನು ಜರುಗಿಸಲು ಮಾನ್ಯ ಉಪ ಲೋಕಾಯುಕ್ತ-02 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 88 ವಿಸೇಬಿ 2017,**
**ಬೆಂಗಳೂರು,ದಿನಾಂಕ: 18-05-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಚಂದ್ರಶೇಖರ ಹೆಚ್.ಎಸ್. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿ 1957ರ ನಿಯಮ 11 ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-02 ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

18/05/2017

(ಎಸ್ ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ&ಸಿ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ್ತರು-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ(ಆಡಳಿತ), ಗ್ರಾ.ಅ.&ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.